# Akashvani : Bangalore
# Regional Bulletin In Kannada
# 26.01.2025 / 2.30 hrs

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><*<><>*><>**

**ಮುಖ್ಯಾಂಶಗಳು**

೧. ರಾಜ್ಯದ ವಿವಿಧೆಡೆ ೭೬ನೇ ಗಣರಾಜ್ಯೋತ್ಸವ ಸಂಭ್ರಮ - ಬೆಂಗಳೂರಿನಲ್ಲಿ ರಾಜ್ಯಪಾಲರಿಂದ ನಾಡಿಗೆ ಸಂದೇಶ

೨. ನವದೆಹಲಿಯ ಕರ್ತವ್ಯ ಪಥದಲ್ಲಿ ಮನಸೂರೆಗೊಂಡ ರಾಜ್ಯದ ಲಕ್ಕುಂಡಿ ಶಿಲ್ಪಕಲೆಯ ತೊಟ್ಟಿಲು ಶಿರ್ಷಿಕೆಯ ಸ್ತಬ್ಧ ಚಿತ್ರ

೩. ಗ್ರಾಹಕರು  ದೂರು ನೀಡಿದ್ದಲ್ಲಿ ಮೈಕ್ರೋಫೈನಾನ್ಸ್ ಸಂಸ್ಥೆಯ ವಿರುದ್ಧ ಕಾನೂನು ಕ್ರಮ- ಸರ್ಕಾರ ಸ್ಪಷ್ಟನೆ

೪. ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಬದುಕು ಸ್ಫೂರ್ತಿದಾಯಕ- ಮುಖ್ಯಮಂತ್ರಿ ಸಿದ್ದರಾಮಯ್ಯ

೫. ರಾಜ್ಯದ ೯ ಸಾಧಕರಿಗೆ ಪದ್ಮ ಪುರಸ್ಕಾರ - ವಯಲಿನ್ ವಾದಕ ಎಂ ಸುಬ್ರಮಣ್ಯ ಅವರಿಗೆ ಪದ್ಮ ವಿಭೂಷಣ

**<><*<><>*><>**

**ಸಂವಿಧಾನದ ಆಶಯಗಳು ಉದಾತ್ತ ಶ್ರೀಮಂತ ಪರಂಪರೆಯನ್ನು ನೆನಪಿಸುತ್ತವೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದ್ದಾರೆ. ಬೆಂಗಳೂರಿನ ಫೀಲ್ಡ್ ಮಾರ್ಷಲ್ ಮಾಣಿಕ್ ಷಾ ಕವಾಯತು ಮೈದಾನದಲ್ಲಿ ಇಂದು ನಡೆದ ಗಣರಾಜ್ಯೋತ್ಸವದಲ್ಲಿ ಧ್ವಜ ಅನಾವರಣಗೊಳಿಸಿ, ಭದ್ರತಾ ಪಡೆಗಳಿಂದ ಗೌರವ ರಕ್ಷೆ ಸ್ವೀಕರಿಸಿ ಅವರು ಮಾತನಾಡಿದರು.**

**ರಾಜ್ಯದಲ್ಲಿ ಮಹಿಳೆಯರ ಆರ್ಥಿಕ ಸಬಲೀಕರಣಕ್ಕಾಗಿ ಜಾರಿಗೆ ತರಲಾದ ಗೃಹಲಕ್ಷ್ಮಿ ಯೋಜನೆಯಡಿ, ಪ್ರತಿ ಕುಟುಂಬದ ಒಬ್ಬ ಗೃಹಿಣಿಗೆ ಮಾಸಿಕ ೨ ಸಾವಿರ ರೂಪಾಯಿ ಆರ್ಥಿಕ ನೆರವು ನೀಡಲಾಗುತ್ತಿದೆ ಎಂದರು.**

**ಧ್ವನಿ - ಥಾವರ್ ಚಂದ್ ಗೆಹಲೋಟ್ ೩೭ ಸೆಕೆಂಡ್**

**ಗೃಹ ಜ್ಯೋತಿ ಯೋಜನೆಯಡಿ, ಪ್ರಸ್ತುತ ೧ ಕೋಟಿ ೬೨ ಲಕ್ಷ ಗ್ರಾಹಕರು ಪ್ರಯೋಜನ ಪಡೆಯುತ್ತಿದ್ದಾರೆ. ಶಕ್ತಿ' ಯೋಜನೆಯಡಿ, ಮಹಿಳೆಯರಿಗೆ ಉಚಿತ ಪ್ರಯಾಣವನ್ನು ಒದಗಿಸಲಾಗುತ್ತಿದೆ. ಇದು ಮಹಿಳಾ ಸಬಲೀಕರಣವನ್ನು ಬಲಪಡಿಸುವತ್ತ ಸರ್ಕಾರದ ಒಂದು ಮಹತ್ವದ ಹೆಜ್ಜೆಯಾಗಿದೆ ಎಂದು**

**ಹೇಳಿದರು.**

ಇತ್ತೀಚಿನ ದಿನಗಳಲ್ಲಿ ಸೈಬರ್ ದಾಳಿಯು ಅಘಾತಕಾರಿ ವಿಷಯವಾಗಿದೆ. ಅಪರಾಧಿಗಳನ್ನು ಪತ್ತೆಹಚ್ಚಲು ಮತ್ತು ಶಿಕ್ಷಿಸಲು ತಂತ್ರಜ್ಞಾನದ ಪರಿಣಾಮಕಾರಿ ಬಳಕೆ ಮಾಡುವುದು ಹಾಗೂ ಜನರಲ್ಲಿ ಜಾಗೃತಿ ಮೂಡಿಸುವುದು ಪ್ರಮುಖ ಹೆಜ್ಜೆಯಾಗಿದೆ ಎಂದರು.

ಪ್ರಾಥಮಿಕ ಹಾಗೂ ಉನ್ನತ ಶಿಕ್ಷಣವನ್ನು ಬಲಪಡಿಸುವ ದೃಷ್ಟಿಯಿಂದ ರಾಜ್ಯದಲ್ಲಿ ಹೊಸ ಶಿಕ್ಷಣ ನೀತಿಯನ್ನು ಜಾರಿಗೆ ತರುವ ಪ್ರಕ್ರಿಯನ್ನು ಪ್ರಾರಂಭಿಸಲಾಗಿದೆ. ಜೊತೆಗೆ ಖಾಲಿ ಇರುವ ಬೋಧಕ ಹುದ್ದೆಗಳನ್ನು ಹಂತ-ಹಂತವಾಗಿ ಭರ್ತಿ ಮಾಡಲು ಉದ್ದೇಶಿಸಲಾಗಿದೆ. ಕಳೆದ ಒಂದೂವರೆ ವರ್ಷಗಳಲ್ಲಿ ೧೩ ಸಾವಿರಕ್ಕೂ ಹೆಚ್ಚಿನ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ಎಂದು ತಿಳಿಸಿದರು.

ಪ್ರಸಕ್ತ ಸಾಲಿನಲ್ಲಿ, ೨೦೨೪ರ ಏಪ್ರಿಲ್‌ನಿಂದ ಸೆಪ್ಟೆಂಬರ್ ವರೆಗೆ ೮೮ ಸಾವಿರದ ೮೫೩ ದಶಲಕ್ಷ ಅಮೆರಿಕನ್ ಡಾಲರ್ ಮೌಲ್ಯದಷ್ಟು ರಫ್ತು ಮಾಡುವ ಮೂಲಕ ರಾಜ್ಯವು ಒಟ್ಟಾರೆ ರಫ್ತಿನಲ್ಲಿ ಪ್ರಥಮ ಸ್ಥಾನದಲ್ಲಿದೆ ಎಂದರು.

<><*<><>*><>

ರಾಜ್ಯದ ವಿವಿಧೆಡೆ ೭೬ನೇ ಗಣರಾಜ್ಯೋತ್ಸವನ್ನು ಸಂಭ್ರಮದಿಂದ ಆಚರಿಸಲಾಯಿತು.

ರಾಮನಗರ ಜಿಲ್ಲಾಡಳಿತ ಆಯೋಜಿಸಿದ್ದ ಗಣರಾಜ್ಯೋತ್ಸವ ಸಮಾರಂಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾರೆಡ್ಡಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ, ಗೌರವ ವಂದನೆ ಸ್ವೀಕರಿಸಿದರು.

ಐತಿಹಾಸಿಕ ನಗರಿ ವಿಜಯಪುರದಲ್ಲಿ ವಿಜೃಂಭಣೆಯಿಂದ ಗಣರಾಜ್ಯೋತ್ಸವ ಆಚರಿಸಲಾಯಿತು. ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ, ಗೌರವ ವಂದನೆ ಸ್ವೀಕರಿಸಿದರು.

ಬೆಳಗಾವಿ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾದ ಗಣರಾಜೋತ್ಸವದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಧ್ವಜಾರೋಹಣ ನೆರವೇರಿಸಿದರು. ನಂತರ ವಿವಿಧ ಪಡೆಗಳ ಗೌರವ ವಂದನೆ ಸ್ವೀಕರಿಸಿದರು.

೭೬ನೇ ಗಣರಾಜ್ಯೋತ್ಸದ ಹಿನ್ನೆಲೆಯಲ್ಲಿ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಧ್ವಜಾರೋಹಣ ಮಾಡಿದರು. ಧ್ವಜಾರೋಹಣದ ಬಳಿಕ ಪೊಲೀಸ್ ,ಸ್ಕೌಟ್ಸ್ ಮತ್ತು ವಿವಿಧ ಶಾಲಾತಂಡಗಳಿಂದ ಗೌರವ ವಂದನೆ ಸ್ವೀಕರಿಸಿದ್ರು.

ಉತ್ತರ ಕನ್ನಡ ಜಿಲ್ಲೆಯ ಕಾರವಾರದ ಪೋಲಿಸ್ ಪರೇಡ್ ಮೈದಾನದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಧ್ವಜಾರೋಹಣ ನೆರವೇರಿಸಿದರು.

೨೬.೦೧.೨೦೨೫ ಪ್ರದೇಶ ಸಮಾಚಾರ ೨.೩೦ ಗಣರಾಜ್ಯೋತ್ಸವ ರಾಜ್ಯ-೨

ಗದಗ ಜಿಲ್ಲಾಡಳಿತದಿಂದ ೭೬ ನೇ ಗಣರಾಜ್ಯೋತ್ಸವ ಸಮಾರಂಭ ಗದಗ ನಗರದ ಕೆ.ಎಚ್.ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯಿತು.

ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ಧ್ವಜಾರೋಹಣ ನೆರವೇರಿಸಿ ಗಣರಾಜ್ಯೋತ್ಸವದ ಶುಭ ಸಂದೇಶ ನೀಡಿದರು.

ಕೋಲಾರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಬಿ. ಎಸ್.ಸುರೇಶ್ ಧ್ವಜಾರೋಹಣ ನೆರವೇರಿಸಿದರು.

ಸಂವಿಧಾನದ ಆಶಯಗಳನ್ನು ಈಡೇರಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗುವುದು ನಮ್ಮೆಲ್ಲರ ಕರ್ತವ್ಯ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ.

ಗಣಿನಾಡು ಬಳ್ಳಾರಿಯ ಬಿಮ್ಸ್ ಕ್ರೀಡಾಂಗಣದಲ್ಲಿ ನಡೆದ ಗಣರಾಜ್ಯೋತ್ಸವ ಸಮಾರಂಭದಲ್ಲಿ ಪೌರಾಡಳಿತ ಸಚಿವ ರಹೀಂಖಾನ್ ರಾಷ್ಟ್ರ ದ್ವಜಕ್ಕೆ ಗೌರವ ವಂದನೆ ಸಲ್ಲಿಸಿದರು.

ಹಾಸನದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ. ಎನ್ ರಾಜಣ್ಣ ಧ್ವಜಾರೋಹಣ ನೆರವೇರಿಸಿ ಗೌರವ ವಂದನೆ ಸ್ವೀಕರಿಸಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿಯು ೭೬ನೇ ಗಣರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ನಿಜವಾದ ದೇಶಪ್ರೇಮವೆಂದರೆ ಎಲ್ಲರನ್ನೂ ಪ್ರೀತಿಸುವುದು, ಗೌರವಿಸುವುದಾಗಿದೆ ಎಂದು ರಾಯಚೂರ ಜಿಲ್ಲಾ ಉಸ್ತುವಾರಿ ಸಚಿವರು ಡಾ.ಶರಣಪ್ರಕಾಶ ಪಾಟೀಲ್ ತಿಳಿಸಿದ್ದಾರೆ. ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಗಣರಾಜ್ಯೋತ್ಸವದ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

೨೬.೦೧.೨೦೨೫ ಪ್ರದೇಶ ಸಮಾಚಾರ ೨.೩೦ ಗಣರಾಜ್ಯೋತ್ಸವ ರಾಜ್ಯ-೩

ಧಾರಾವಡದಲ್ಲಿ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಧ್ವಜಾರೋಹಣ ನೆರವೇರಿಸಿದರು.

ಧ್ವನಿ ೨೦ ಸೆಕೆಂಡ್ ಸಂತೋಷ್ ಲಾಡ್

ಬೆಂಗಳೂರಿನ ಏPಅಅ ಕಚೇರಿಯಲ್ಲಿ ಆಯೋಜಿಸಲಾಗಿದ್ದ ೭೬ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ ೦೦|ಅಅ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಧ್ವಜಾರೋಹಣ ನೆರವೇರಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

<><*<><>*><>

ಭಾರತೀಯ ಸಂವಿಧಾನ ಜಾರಿಗೆ ಬಂದ ೭೫ ವರ್ಷಗಳ ನಿಮಿತ್ತ ಈ ಬಾರಿ ಸುವರ್ಣ ಭಾರತ, ಪರಂಪರೆ ಮತ್ತು ಅಭಿವೃದ್ಧಿ ಘೋಷವಾಕ್ಯದ ಮೂಲಕ ನವದೆಹಲಿಯಲ್ಲಿ ಗಣರಾಜೋತ್ಸವ ಆಚರಣೆ ಮಾಡಲಾಯಿತು. ಕರ್ತವ್ಯ ಪಥದಲ್ಲಿ ರಾಷ್ಟ್ರಪತಿ ರಾಷ್ಟ್ರಪತಿ ದ್ರೌಪದಿ ಮುರ್ಮು ಧ್ವಜಕ್ಕೆ ಗೌರವ ನಮನ ಸಲ್ಲಿಸಿದರು.

ಇದೇ ವೇಳೆ ಸ್ತಬ್ಧ ಚಿತ್ರಗಳ ಮೆರವಣಿಗೆಯಲ್ಲಿ. ರಾಜ್ಯದ ಲಕ್ಕುಂಡಿ ಶಿಲ್ಪಕಲೆಯ ತೊಟ್ಟಿಲು, ಶಿರ್ಷಿಕೆಯ ಸ್ತಬ್ಧ ಚಿತ್ರ ಗಣರಾಜ್ಯೋತ್ಸವ ಪರೇಡ್‌ನಲ್ಲಿ ಸಾಗಿತು. ಗದಗ ಜಿಲ್ಲೆಯ ಲಕ್ಕುಂಡಿಯ ಐತಿಹಾಸಿಕ ಬ್ರಹ್ಮ ಜಿನಾಲಯ ದೇವಾಲಯ ಎಲ್ಲರ ಗಮನ ಸೆಳೆಯಿತು. ೧೧ನೇ ಶತಮಾನದ ಪಶ್ಚಿಮ ಚಾಲುಕ್ಯ ಶೈಲಿಯ ಈ ಅದ್ಭುತ ದೇವಾಲಯ, ಅದರ ಸುಂದರ ಶಿಲ್ಪಕಲೆ ಮತ್ತು ವಾಸ್ತುಶಿಲ್ಪಕ್ಕೆ ಹೆಸರುವಾಸಿಯಾಗಿದೆ.

<><*<><>*><>

ಗ್ರಾಹಕರಿಗೆ ಖಾಸಗಿ ಹಣಕಾಸು ಸಂಸ್ಥೆಗಳ ಕಿರುಕುಳ ಹೆಚ್ಚುತ್ತಿದ್ದು, ಇದಕ್ಕೆ ಕಾರಣವಾದವರ ವಿರುದ್ಧ ದೂರು ನೀಡಿದ್ದಲ್ಲಿ ತಕ್ಷಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರೊಂದಿಗೆ ಮಾತನಾಡಿದ ಅವರು ಮೈಕ್ರೋಫೈನಾನ್ಸ್ ಸಂಸ್ಥೆ ಅಥವಾ ಲೇವಾದೇವಿದಾರರು ನೀಡುವ ತೊಂದರೆಗಳ ವಿರುದ್ಧ ದೂರು ನೀಡಲು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಹಾಯವಾಣಿ ತೆರೆಯಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಇನ್ನೊಂದೆಡೆ ಹುಬ್ಬಳ್ಳಿಯಲ್ಲಿ ಪ್ರತಿಕ್ರಿಯಿಸಿದ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮೈಕ್ರೊ ಫೈನಾನ್ಸ್ ನಿಯಂತ್ರಣಕ್ಕೆ ಆರ್‌ಬಿಐ ನಿಯಮಗಳಿವೆ ಎಂದು ತಿಳಿಸಿದ್ದಾರೆ. ಮೈಕ್ರೊ ಫೈನಾನ್ಸ್‌ಗೆ ಬೆಂಬಲ ನೀಡುತ್ತಿರುವ  ಪೊಲೀಸ್ ಅಧಿಕಾರಿಗಳ ವಿರುದ್ಧ ಸರ್ಕಾರ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

<><*<><>*><>

ಸಣ್ಣ ಸಾಲ ಲೇವಾದೇವಿದಾರರು  ಆರ್‌ಬಿಐ ಕಾನೂನುಗಳನ್ನು ಪಾಲಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದು, ವಾರದೊಳಗೆ ಸುಗ್ರಿವಾಜ್ಞೆಯ ಮೂಲಕ ಕಠಿಣ ಕಾನೂನು ಜಾರಿಗೆ ತರಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ತುಮಕೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಣ್ಣ ಹಣಕಾಸು ಸಂಸ್ಥೆಗಳ ಫೈನಾನ್ಸ್‌ಗಳು ಸಾಲ ವಸೂಲಾತಿಗೆ  ಹೊರಗುತ್ತಿಗೆ ನೀಡಿವೆ. ಇದು ಕಾನೂನಿಗೆ ವಿರುದ್ಧವಾಗಿದ್ದು, ಬಡವರ ಮೇಲೆ ದೌರ್ಜನ್ಯ ನಡೆಸಿದರೆ ಸಹಿಸಲು ಸಾಧ್ಯವಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

<><*<><>*><>

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣರವರ ಬದುಕು ಸ್ಫೂರ್ತಿದಾಯಕವಾಗಿದ್ದು, ಅವರ ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಗೌರವ ಸಲ್ಲಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ೧೯೪ ನೇ ಸ್ಮರಣೋತ್ಸವ  ಅಂಗವಾಗಿ ರಾಯಣ್ಣನವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು  ಭಾರತದ ಶ್ರೇಷ್ಠ ಸ್ವಾತಂತ್ರ್ಯ ಹೋರಾಟಗಾರರಾಗಿದ್ದ ಸಂಗೊಳ್ಳಿ ರಾಯಣ್ಣ ಅವರು ಕನ್ನಡ ನಾಡು ನುಡಿ ನೆಲ ಜಲಗಳಿಗೆ ಅತೀವ ಗೌರವ ನೀಡುವ ಬದುಕು ನಮಗೆಲ್ಲ ಸ್ಫೂರ್ತಿ ಎಂದರು.

<><*<><>*><>

ಈ ಬಾರಿಯ ಪದ್ಮಪ್ರಶಸ್ತಿಗಳಿಗೆ ಕರ್ನಾಟಕದ ೯ ಸಾಧಕರನ್ನು ಆಯ್ಕೆ ಮಾಡಲಾಗಿದೆ. ವಯೋಲಿನ್ ವಾದಕ ಎಲ್.ಸುಬ್ರಮಣ್ಯಂ ಅವರು ಪದ್ಮವಿಭೂಷಣಕ್ಕೆ ಭಾಜನರಾಗಿದ್ದರೆ, ಕನ್ನಡದ ಚಲನಚಿತ್ರ ರಂಗದ ಹಿರಿಯ ನಟ ಅನಂತನಾಗ್ ಪದ್ಮಭೂಷಣ ಪ್ರಶಸ್ತಿಗೆ ಪಾತ್ರರಾಗಿದ್ದಾರೆ. ಅವರೊಂದಿಗೆ ಸಾಹಿತ್ಯ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಪ್ರಸಾರ ಭಾರತಿ ಮಾಜಿ ಅಧ್ಯಕ್ಷ ಎ.ಸೂರ್ಯಪ್ರಕಾಶ್ ಅವರು ಈ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಹಾಸನದ ಅರಕಲಗೂಡು ಮೂಲದ ಹಿರಿಯ ಪರ್ತಕರ್ತ ಎ ಸೂರ್ಯ ಪ್ರಕಾಶ್ ಅವರಿಗೆ ಪದ್ಮ ಭೂಷಣ ಪ್ರಶಸ್ತಿ ದೊರೆತಿದೆ. ಅವರು ಪ್ರಸಾರ ಭಾರತಿ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದಾರೆ. ಇವರು ಆಕಾಶವಾಣಿಯೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ- ೩೫ ಸೆಕೆಂಡ್ ಸೂರ್ಯ ಪ್ರಕಾಶ್

ಎಂದಿನಂತೆ ಈ ಬಾರಿಯೂ ಪದ್ಮಪ್ರಶಸ್ತಿಗಳಿಗಾಗಿ ಕೇಂದ್ರ ಸರ್ಕಾರ ತೆರೆಮರೆಯ ಸಾಧಕರನ್ನು ಆಯ್ಕೆ ಮಾಡಿದ್ದು, ಕಲೆಯ ಕ್ಷೇತ್ರದಲ್ಲಿ ತೊಗಲು ಗೊಂಬೆಯಾಟ ಕಲಾವಿದರಾದ ಭೀಮವ್ವ ದೊಡ್ಡಬಾಳಪ್ಪ ಶಿಳ್ಳೆಕ್ಯಾತಾರ, ಚಲನಚಿತ್ರ ನಿರ್ಮಾಪಕ ಹಾಸನ ರಘು, ವ್ಯಾಪಾರ ಮತ್ತು ಕೈಗಾರಿಕಾ ಕ್ಷೇತ್ರದಲ್ಲಿ ಪ್ರಶಾಂತ್ ಪ್ರಕಾಶ್, ಸಂಗೀತ ಕ್ಷೇತ್ರದಲ್ಲಿ ರಿಕ್ಕಿಕೇಜ್, ಜಾನಪದ ಕಲೆಗಾಗಿ ವೆಂಕಪ್ಪ ಅಂಬಾಜಿ ಸುಗಟೇಕಾರ್, ವೈದ್ಯಕೀಯ ಕ್ಷೇತ್ರದಲ್ಲಿ ಡಾ.ವಿಜಯಲಕ್ಷ್ಮೀ ದೇಶಮಾನೆ ಕರ್ನಾಟಕದಿಂದ ಆಯ್ಕೆಯಾಗಿದ್ದಾರೆ.

<><*<><>*><>